ಕಾಮಗಾರಿಗಳಾಗಿ ಪರಿಗಣಿಸಿದೆ. ಈ ಸಂಬಂಧ ಪ್ರಸಕ್ತ ಸಾಲಿನಲ್ಲಿ ಅನುದಾನ ಲಭ್ಯವಿಲ್ಲದ ಕಾರಣ ಹೊಸ ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ.

4) 2001-02ನೇ ಸಾಲಿನಲ್ಲಿ 3054 ರಸ್ತೆ ಮತ್ತು ಸೇತುವೆಗಳು ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುಷ್ಠಾನಗೊಳಿಸಿ ಪ್ರಸಕ್ತ ಸಾಲಿಗೆ ಮುಂದುವರೆದ ಕಾಮಗಾರಿಗಳ ವಿವರಗಳು ಈ ಕೆಳಕಂಡಂತಿರುತ್ತದೆ.

ಕ್ರ.ಸಂ	ತಾಲ್ಲೂಕು	ಕಾಮಗಾರಿಗಳ ಸಂಖ್ಯೆ	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)
1	ಆನೇಕಲ್	89	123.98
2	ಬೆಂಗಳೂರು ಉತ್ತರ	118	228.22
3	ಬೆಂಗಳೂರು ದಕ್ಷಿಣ	241	183.53
	ಒಟ್ಟು	448	835.73

ಗ್ರಾಮ ಪಂಚಾಯ್ತಿಗಳ ಸಬಲೀಕರಣ

296 (264) ಶ್ರೀ ಪಾಟೀಲ್ ಡಿ.ಆರ್. (ಗದಗ್) - ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಮ ಪಂಚಾಯಿತಿ ಹಾಗೂ ಗ್ರಾಮ ಸಭೆಗಳನ್ನು ಸಬಲೀಕರಣಗೊಳಿಸುವ ಸರಕಾರದ ಇಚ್ಛೆ ಈಗಲೂ ಈಡೇರದಿರಲು ಇರುವ ತೊಂದರೆಗಳೇನು ;

ಆ) ಸರಕಾರ ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಗೆ ಬದ್ಧವಾಗಿದೆಯೇ ; ಬದ್ಧವಾಗಿದ್ದಲ್ಲಿ, ಆರ್.ಡಿ.ಪಿ.ಆರ್. ವಿಷಯ ಸಮಿತಿ ಮಾಡಿರುವ ಶಿಫಾರಸ್ಸುಗಳನ್ನು ತುರ್ತಾಗಿ ಅನುಷ್ಠಾನಗೊಳಿಸಲಾಗುವುದೇ ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಯಾವ ತೊಂದರೆಯೂ ಇರುವುದಿಲ್ಲ.

ಆ) ವಿಕೇಂದ್ರೀಕರಣ ವ್ಯವಸ್ಥೆಗೆ ಬದ್ಧವಾಗಿದೆ. ಸರಕಾರವು ರಚಿಸಿದ ಕಾರ್ಯಪಡೆಯ ವರದಿಯ ಆಧಾರದ ಮೇಲೆ ಒಟ್ಟು 47 ತಿದ್ದುಪಡಿಗಳುಳ್ಳ ವಿಧೇಯಕವನ್ನು ವಿಧಾನಸಭೆಯ ಅಧಿವೇಶನದಲ್ಲಿ ಈಗಾಗಲೇ ಮಂಡಿಸಲಾಗಿದೆ. ವಿಷಯ ಸಮಿತಿ ಮಾಡಿರುವ ಶಿಫಾರಸ್ಸುಗಳನ್ನು ಜಾರಿಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಬಿಸಿ ಊಟ ಯೋಜನೆ

298 (543) ಶ್ರೀ ಪಾಟೀಲ್ ಶಿವಾನಂದ ಸಿದ್ದರಾಮಗೌಡ (ತಿಕೋಟ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ "ಬಿಸಿ ಊಟ ಯೋಜನೆ" ಜಾರಿಯಲ್ಲಿದೆಯೇ ; ಇದನ್ನು ಯಾವಾಗ ಪ್ರಾರಂಭಿಸಲಾಯಿತು ;

ಆ) ರಾಜ್ಯದ ಯಾವ ಜಿಲ್ಲೆಗಳಲ್ಲಿ "ಬಿಸಿ ಊಟ ಯೋಜನೆ"ಯನ್ನು ಅನುಷ್ಠಾನ ಗೊಳಿಸಲಾಗಿದೆ ; (ಜಿಲ್ಲಾವಾರು ಶಾಲೆಗಳ ಪಟ್ಟಿ ಒದಗಿಸುವುದು) ;